# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರ ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಉತ್ತರ

*********

**ಪ್ರಶ್ನೆ:-**

ಕರ್ನಾಟಕ ರಾಜ್ಯದಲ್ಲಿ ಪ್ರಸ್ತುತ ಸುಮಾರು 1200 ವರ್ಷಗಳ ಇತಿಹಾಸ ಹೊಂದಿ ಜೀವಿಸುತ್ತಿರುವ ಪ್ರಾಚೀನ ದ್ರಾವಿಡ ಮೂಲಭಾಷೆಗಳ ಉಪಭಾಷೆಯಲ್ಲೊಂದಾದ **"ಬ್ಯಾರಿ"** ಭಾಷೆ ಆಧಾರಿತ ಸಮೃದ್ಧ ಜೀವಿತ ಸಂಸ್ಕೃತಿ ಹೊಂದಿರುವ ಬ್ಯಾರಿ ಜನಾಂಗವು ತನ್ನ ಸುದೃಢ ಅಸ್ತಿತ್ವವನ್ನು ಹೊಂದಿ ಇಂದು ಕರ್ನಾಟಕ ರಾಜ್ಯಾದ್ಯಂತ ತನ್ನ ಜನಸಂಖ್ಯೆಯನ್ನು 25 ಲಕ್ಷಕ್ಕಿಂತಲೂ ಕಡಿಮೆ ಇರದಂತೆ ವಾಸ ಹೊಂದಿ ಜೀವನ ನಡೆಸಿಕೊಂಡು ಬಂದಿದ್ದು, ಕರಾವಳಿ ಕರ್ನಾಟಕದ ದಕ್ಷಿಣ ಕನ್ನಡ, ಉಡುಪಿ, ಕೊಡಗು ಜಿಲ್ಲೆಗಳಲ್ಲಿ ಅಧಿಕವಾಗಿ ಜೀವಿಸುತ್ತಿದ್ದು, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಜನಸಂಖ್ಯೆ ಹೊಂದಿರುತ್ತಾರೆ. ಈ ಜನಾಂಗದ ಶೈಕ್ಷಣಿಕ, ಸಾಮಾಜಿಕ, ಅಭಿವೃದ್ಧಿಗಾಗಿ ಬ್ಯಾರಿ ನಿಗಮವನ್ನು ಪ್ರಾರಂಭಿಸಬೇಕೆಂದು ಅನೇಕ ಸಂದರ್ಭದಲ್ಲಿ ಸರ್ಕಾರದ ಗಮನ ಸೆಳೆದಿದ್ದಾರೆ. ಈ ಬಗ್ಗೆ ಆಶ್ವಾಸನೆ ನೀಡಲಾಗಿದ್ದರೂ, ಆದರೆ ಈವರೆಗೂ ಯಾವುದೇ ಕ್ರಮಕೈಗೊಳ್ಳದೇ ಇರುವುದರ ಬಗ್ಗೆ **"ಬ್ಯಾರಿ ಅಭಿವೃದ್ಧಿ ನಿಗಮ"**ವನ್ನು ಪ್ರಾರಂಭಿಸಲು ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಡಿಯಲ್ಲಿ ಬರುವ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಜನಾಂಗದ ಅಭಿವೃದ್ಧಿಗಾಗಿ ವಿವಿಧ ಸಾಲ ಮತ್ತು ಸಹಾಯಧನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮುಸ್ಲಿಂ ಸಮುದಾಯದಲ್ಲಿ ವಿವಿಧ ಪಂಗಡಗಳಿದ್ದು, ಅದರಲ್ಲಿ ಬ್ಯಾರಿ ಜನಾಂಗವು ಒಂದಾಗಿದ್ದು, ಈ ಜನಾಂಗವು ಹೆಚ್ಚಾಗಿ ಕರ್ನಾಟಕದ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಚಿಕ್ಕಮಗಳೂರು ಮತ್ತು ಬೆಂಗಳೂರು ನಗರ ಪ್ರದೇಶಗಳಲ್ಲಿ ವಾಸವಾಗಿರುತ್ತಾರೆ. ಈ ಪಂಗಡವು ಮುಸ್ಲಿಂ ಸಮುದಾಯದ ಪಂಗಡಗಳಲ್ಲಿ ಒಂದಾಗಿರುವುದರಿಂದ, ಇವರ ಶೈಕ್ಷಣಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಗಳನ್ನು ನಿಯಮಾನುಸಾರ ನೀಡಲಾಗುತ್ತಿದೆ.

.......2.

ಮುಂದುವರೆದು, ಬ್ಯಾರಿ ಅಭಿವೃದ್ಧಿ ನಿಗಮವನ್ನು ಪ್ರಾರಂಭಿಸುವ ಯಾವುದೇ ಪ್ರಸ್ತಾವನೆಗಳು ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ ಸ್ವೀಕೃತವಾಗಿರುವುದಿಲ್ಲ.

**ಕಡತ ಸಂಖ್ಯೆ:MWD 73 LMQ 2025**

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು